**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**

**ಗೃಹಲಕ್ಷ್ಮಿ ಯೋಜನೆ**

**ಗೃಹಲಕ್ಷ್ಮಿ ಯೋಜನೆಯಡಿ ಸಾಮಾನ್ಯವಾಗಿ ಕೇಳಲಾಗುವ ಪ್ರಶ್ನೆಗಳಿಗೆ ಉತ್ತರಗಳು.**

1) **ಗೃಹಲಕ್ಷ್ಮಿ ಯೋಜನೆ ಎಂದರೇನು?**
"ಗೃಹಲಕ್ಷ್ಮಿ ಯೋಜನೆ" ಕರ್ನಾಟಕ ಸರ್ಕಾರವು ಜಾರಿಗೆ ತಂದಿರುವ ಹೊಸ ಯೋಜನೆಯಾಗಿದ್ದು, ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000-00 ಗಳನ್ನು ನೀಡುವ ಯೋಜನೆಯಾಗಿರುತ್ತದೆ.

2) **ಗೃಹಲಕ್ಷ್ಮಿ ಯೋಜನೆಯ ಉದ್ದೇಶವೇನು?**
**ರಾಜ್ಯದ ಮಹಿಳೆಯರ ಆರ್ಥಿಕ ಸಬಲೀಕರಣ ಹೆಚ್ಚಿಸುವುದು ಮತ್ತು ಕುಟುಂಬದ ಯಜಮಾನಿತು ಆರ್ಥಿಕವಾಗಿ ಸಬಲೀಕರಣಗೊಂಡಲ್ಲಿ ಕುಟುಂಬದ ನಿರ್ವಹಣೆಯು ಉತ್ತಮ ಗುಣ ಮಟ್ಟದಲ್ಲಿರುತ್ತದೆ**.

3) **ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹತೆ ಏನು?**
ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸುವ ಮಹಿಳೆಯು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ.

4) **ಈ ಯೋಜನೆಯ ಅರ್ಜಿಯನ್ನು ಎಲ್ಲಿ ಸಲ್ಲಿಸಬಹುದು?**
ಅರ್ಜಿದಾರರು ಸೇವಾ ಸಿಂಧು ಪೋರ್ಟಲ್ ಮೂಲಕವಾಗಲೀ ಅಥವಾ ಭೌತಿಕವಾಗಲೀ (ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್) ಗಳಲ್ಲಿ ಅರ್ಜಿ ಸಲ್ಲಿಸಬಹುದು.

5) **ಈ ಯೋಜನೆಯು ಎಂದಿನಿಂದ ಜಾರಿಗೆ ಬರುತ್ತದೆ?**
ಈ ಯೋಜನೆಯು ದಿನಾಂಕ:15.06.2023 ರಿಂದ ಜಾರಿಗೆ ಬರುತ್ತದೆ.

6) **ಈ ಯೋಜನೆಗೆ ಫಲಾನುಭವಿಗಳು ಎಂದಿನಿಂದ ಅರ್ಜಿ ಸಲ್ಲಿಸಬಹುದು?**
ಫಲಾನುಭವಿಗಳು ದಿನಾಂಕ:16.06.2023 ರಿಂದ ಅರ್ಜಿ ಸಲ್ಲಿಸಬಹುದು.

7) **ಫಲಾನುಭವಿಗಳ ಆಯ್ಕೆ ಯಾವ ರೀತಿ?**
ದಿನಾಂಕ:15.07.2023 ರಿಂದ ಅರ್ಜಿ ಪರಿಶೀಲಿಸಿ, ಸ್ವಯಂ ಘೋಷಣೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

8) **ಈ ಯೋಜನೆಯ ಲಾಭವು ಯಾವಾಗ ಫಲಾನುಭವಿಗಳ ಖಾತೆಗೆ ಸೇರಲು ಪ್ರಾರಂಭವಾಗುತ್ತದೆ?**
ಆಯ್ಕೆಗೊಂಡ ಫಲಾನುಭವಿಗಳಿಗೆ ಆಗಸ್ಟ 15 ರಿಂದ ಅವರ ಬ್ಯಾಂಕ್ ಖಾತೆಗೆ ಹಣವನ್ನು ವರ್ಗಾವಣೆ ಮಾಡಲಾಗುವುದು.

**9) ಈ ಯೋಜನೆಯನ್ನು ಆಫ್ಲೈನ್ (offline) ಮೂಲಕ ಪಡೆಯಬಹುದೇ?**

ಹೌದು. ಭರ್ತಿ ಮಾಡಿದ ಅರ್ಜಿಗಳನ್ನು ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಮೂಲಕ ಸೇವಾ ಸಿಂಧು ಪೋರ್ಟಲ್ ನಲ್ಲಿ (https://sevasindhugs.karnataka.gov.in/gruhalakshmi) ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು.

10) **ಈ ಯೋಜನೆಯನ್ನು ಪಡೆಯಲು ಯಾವುದೆಲ್ಲಾ ದಾಖಲೆಗಳನ್ನು ಸಲ್ಲಿಸಬೇಕು?**

ಆಧಾರ್ ಕಾರ್ಡ್ ಪ್ರತಿ ಹಾಗೂ ಬ್ಯಾಂಕ್ ಖಾತೆ ಪಾಸ್ ಪುಸ್ತಕದ ಪ್ರತಿ ಸಲ್ಲಿಸುವುದು.

11) **ಅರ್ಜಿ ಸಲ್ಲಿಸುವಾಗ ಶುಲ್ಕ ಪಾವತಿಸಬೇಕೆ?**

ಅರ್ಜಿ ಸಲ್ಲಿಸುವಾಗ ಶುಲ್ಕ ಪಾವತಿಸುವ ಅಗತ್ಯ ಇಲ್ಲ.

**12) ಅರ್ಜಿಸಲ್ಲಿಸಿದ ನಂತರ ಸ್ವೀಕೃತಿ ದೊರೆಯುವುದೇ?**

ಹೌದು, ಅರ್ಜಿ ಸಲ್ಲಿಸಿದ ನಂತರ SMS ಮೂಲಕ ಹಾಗೂ ಸೇವಾಸಿಂಧು ಪೋರ್ಟಲ್ ಮೂಲಕ Auto generated ಸ್ವೀಕೃತಿಗಳನ್ನು ಹಾಗೂ ಮಂಜೂರಾತಿ ಆದೇಶವನ್ನು ಪಡೆಯುವುದು.

**13) ಯೋಜನೆಯ ಮಂಜೂರಾತಿ ಪ್ರಾಧಿಕಾರ?**

ಗೃಹಲಕ್ಷ್ಮಿ ಯೋಜನೆಯ ಮಂಜೂರಾತಿ ಪ್ರಾಧಿಕಾರವು ಸಂಬಂಧಪಟ್ಟ ತಾಲ್ಲೂಕು/ಯೋಜನೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾಗಿರುತ್ತಾರೆ.

**14) ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಮಹಿಳೆಯರಿದ್ದಲ್ಲಿ ಈ ಯೋಜನೆಗೆ ಅರ್ಹರೇ?**

ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸುವ ಕುಟುಂಬದ ಒಬ್ಬ ಮಹಿಳೆಯು ಈ ಯೋಜನೆಗೆ ಅರ್ಹರಾಗುತ್ತಾರೆ.

**15) ಯಾರು ಈ ಯೋಜನೆಗೆ ಅರ್ಹರಾಗುವುದಿಲ್ಲ?**

ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಮತ್ತು ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರಾಗಿದ್ದಲ್ಲಿ ಅರ್ಹರಾಗುವುದಿಲ್ಲ.

**16) ತಪ್ಪು ಮಾಹಿತಿ/ದಾಖಲಾತಿ ನೀಡಿ, ಸೌಲಭ್ಯ ಪಡೆದಿರುವುದು ಕಂಡುಬಂದಲ್ಲಿ?**

ಈಗಾಗಲೇ ಪಾವತಿಸಲಾಗಿರುವ ಸೌಲಭ್ಯದ ಮೊತ್ತವನ್ನು ಅರ್ಜಿದಾರರಿಂದ ಹಿಂಪಡೆಯಲಾಗುವುದು ಮತ್ತು ಅಂತಹ ಫಲಾನುಭವಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.

**17) ಕುಟುಂಬದ ಯಜಮಾನಿತು ಮರಣ ಹೊಂದಿದಲ್ಲಿ, ಮುಂದಿನ ಕ್ರಮವೇನು?**

ಕುಟುಂಬದ ಯಜಮಾನಿಯು ಮರಣ ಹೊಂದಿದಲ್ಲಿ ಯೋಜನೆಯ ಸೌಲಭ್ಯ ಸ್ಥಗಿತಗೊಳಿಸಲಾಗುವುದು.

** ** **